ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2018–19 ದಿನಾಂಕ: 22–12–2018

# ಪತ್ರಿಕಾ ಆಮಂತ್ರಣ

1. ಜನಪರ ಶಿಲಾ ಶಿಲ್ಪ ಶಿಬಿರ ಸಮಾರೋಪ ಸಮಾರಂಭ:

**ಶಿಲ್ಪಗಳ ಲೋಕಾರ್ಪಣೆ:**

ಶಿಲ್ಪಿ ರು. ಕಾಳಾಚಾರ್,

ಅಧ್ಯಕ್ಷರು, ಕರ್ನಾಟಕ ಶಿಲ್ಪಕಲಾ ಅಕಾಡೆಮಿ, ಬೆಂಗಳೂರು.

**ಸಮಾರೋಪ ನುಡಿ:**

ಕೆ.ವಿ. ಸುಬ್ರಮಣ್ಯಂ, ಹಿರಿಯ ಕಲಾವಿದರು, ಬೆಂಗಳೂರು.

**ಮುಖ್ಯ ಅತಿಥಿ:**

ಬಿ.ಎಸ್. ವಿದ್ಯಾರಣ್ಯ, ಸಾಹಿತಿ ಮತ್ತು ರಂಗಕಲಾವಿದರು, ಬೆಂಗಳೂರು.

**ಅಧ್ಯಕ್ಷತೆ:**

ಎಸ್. ಮರಿಸ್ವಾಮಿ,

ಅಧ್ಯಕ್ಷರು, ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಶತಮಾನೋತ್ಸವ ಸಮಿತಿ ಟ್ರಸ್ಟ್ (ರಿ)

ದಿನಾಂಕ: 24–12–2018, ಸೋಮವಾರ, ಸಮಯ: ಸಂಜೆ 4–00 ಗಂಟೆಗೆ

ಸ್ಥಳ: ಸ್ಫೂರ್ತಿಧಾಮ, ಮಾಗಡಿ ಮುಖ್ಯರಸ್ತೆ, ಅಂಜನಾನಗರ, ಬೆಂಗಳೂರು.

**<u>ಪತ್ರಿಕಾ ಪ್ರಕಟಣೆ</u>**

# ರಾಜ್ಯ ಸಚಿವ ಸಂಪುಟ ವಿಸ್ತರಣೆ : ಎಂಟು ಸಚಿವರ ಪ್ರಮಾಣ ವಚನ ಸ್ವೀಕಾರ

**<u>ಬೆಂಗಳೂರು, ಡಿಸೆಂಬರ್ 22 (ಕರ್ನಾಟಕ ವಾರ್ತೆ):</u>**

ಕಾಂಗ್ರೆಸ್ ಪಕ್ಷದ ಎಂಟು ಸದಸ್ಯರ ಸೇರ್ಪಡೆಯೊಂದಿಗೆ ಎಂಟು ತಿಂಗಳ ಹೆಚ್ ಡಿ ಕುಮಾರಸ್ವಾಮಿ ನೇತೃತ್ವದ ರಾಜ್ಯ ಸಚಿವ ಸಂಪುಟ ಶನಿವಾರ ಸಂಜೆ ವಿಸ್ತರಣೆಯಾಗಿದೆ. ಇದರಿಂದ ಜಾತ್ಯಾತೀತ ಜನತಾ ದಳ ಮತ್ತು ಕಾಂಗ್ರೆಸ್ ಪಕ್ಷದ ಮೈತ್ರಿ ಸರ್ಕಾರದ ಸಂಖ್ಯಾಬಲ 32 ಕ್ಕೆ ಏರಿದೆ.

ಬಬಲೇಶ್ವರ ಕ್ಷೇತ್ರದ ಶಾಸಕ ಎಂ. ಬಿ. ಪಾಟೀಲ್, ರಾಜ್ಯ ವಿಧಾನ ಪರಿಷತ್ ಸದಸ್ಯ ಆರ್. ಬಿ. ತಿಮ್ಮಾಪೂರ್, ಯಮಕನಮರಡಿ ಕ್ಷೇತ್ರದ ಶಾಸಕ ಸತೀಶ್  ಎಲ್ ಜಾರಕಿಹೊಳಿ, ಕುಂದಗೋಳ ಕ್ಷೇತ್ರದ ಶಾಸಕ ಚನ್ನಬಸಪ್ಪ ಸತ್ಯಪ್ಪ ಶಿವಳ್ಳಿ. ಹೂವಿನ ಹಡಗಲಿ ಕ್ಷೇತ್ರದ ಶಾಸಕ ಪಿ.ಟಿ. ಪರಮೇಶ್ವರ ನಾಯ್ಕ್, ಸಂಡೂರು ಕ್ಷೇತ್ರದ ಶಾಸಕ ಇ. ತುಕಾರಾಂ, ಬೀದರ್ ಉತ್ತರ ಕ್ಷೇತ್ರದ ಶಾಸಕ ರಹೀಂ ಖಾನ್ ಹಾಗೂ ಹೊಸಕೋಟೆ ಶಾಸಕ ಎಂ ಟಿ ಬಿ ನಾಗರಾಜ್ ಅವರು ಸಂಪುಟ ದರ್ಜೆ ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸಿದ ಗಣ್ಯರು.

ಎಂ ಬಿ ಪಾಟೀಲ್, ಆರ್ ಬಿ ತಿಮ್ಮಾಪೂರ್ ಮತ್ತು ಇ ತುಕಾರಾಂ ಅವರು ದೇವರ ಹೆಸರಿನಲ್ಲಿ, ಸತೀಶ್ ಎಲ್ ಜಾರಕಿಹೊಳಿ ಅವರು ಬಸವ, ಬುದ್ಧ ಮತ್ತು ಅಂಬೇಡ್ಕರ್ ಅವರ ಹೆಸರಿನಲ್ಲಿ, ಸಿ ಎಸ್ ಶಿವಳ್ಳಿ ಅವರು ಈಶ್ವರನ ಹೆಸರಿನಲ್ಲಿ, ಪಿ ಟಿ ಪರಮೇಶ್ವರ ನಾಯ್ಕ್ ಅವರು ತುಳಜಾ ಭವಾನಿ ಅವರ ಹೆಸರಿನಲ್ಲಿ, ರಹೀಂ ಖಾನ್ ಅವರು ಅಲ್ಲಾಹ್ ಹೆಸರಿನಲ್ಲಿ ಹಾಗೂ ಎಂ ಟಿ ಬಿ ನಾಗರಾಜ್ ಅವರು ಮಂಜುನಾಥ ಸ್ವಾಮಿ ಹೆಸರಿನಲ್ಲಿ ಪ್ರಮಾಣ ವಚನ ಸ್ವೀಕರಿಸಿದರು. ರಹೀಂ ಖಾನ್ ಅವರು ಇಂಗ್ಲೀಷ್ ಭಾಷೆಯಲ್ಲಿ ಪ್ರಮಾಣ ವಚನ ಸ್ವೀಕರಿಸಿ ಎಲ್ಲರ ಗಮನ ಸೆಳೆದರು. ಉಳಿದೆಲ್ಲರೂ ಕನ್ನಡ ಭಾಷೆಯಲ್ಲಿಯೇ ಪ್ರಮಾಣ ವಚನವನ್ನು ಸ್ವೀಕರಿಸಿದರು.

ಪ್ರಮಾಣ ವಚನ ಸ್ವೀಕರಿಸಿದವರಲ್ಲಿ ನಾಲ್ಕು ಮಂದಿ ಈಗಾಗಲೇ ಸಚಿವರಾಗಿ ಅನುಭವ ಹೊಂದಿದ್ದಾರೆ. ಉಳಿದ ನಾಲ್ಕು ಮಂದಿ ಪ್ರಥಮ ಬಾರಿಗೆ ಸಚಿವರಾಗಿ ಅಧಿಕಾರದ ಚುಕ್ಕಾಣಿ ಹಿಡಿಯುತ್ತಿದ್ದಾರೆ. ನೂತನ ಸಚಿವರಿಗೆ ರಾಜ್ಯಪಾಲ ವಜುಭಾಯಿ ರೂಢಾಬಾಯಿ ವಾಲಾ ಅವರು ಅಧಿಕಾರ ಪದ ಹಾಗೂ ಗೋಪ್ಯತಾ ಪ್ರಮಾಣ ವಚನ

ಬೋಧಿಸಿದರು. ಪ್ರಮಾಣ ವಚನ ಸ್ವೀಕರಿಸಿದ ಎಲ್ಲಾ ಸಚಿವರಿಗೂ ರಾಜ್ಯಪಾಲ ವಜುಭಾಯಿ ವಾಲಾ, ಮುಖ್ಯಮಂತ್ರಿ ಹೆಚ್ ಡಿ ಕುಮಾರಸ್ವಾಮಿ ಹಾಗೂ ಉಪ ಮುಖ್ಯಮಂತ್ರಿ ಡಾ ಜಿ ಪರಮೇಶ್ವರ್ ಅವರು ಪುಷ್ಪಗುಚ್ಛ ನೀಡಿ ಅಭಿನಂದಿಸಿದರು.

ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಟಿ ಎಂ ವಿಜಯ ಭಾಸ್ಕರ್ ಅವರು ಸಮಾರಂಭವನ್ನು ನಿರೂಪಿಸಿದರು.

ಈ ಸಮಾರಂಭದಲ್ಲಿ ಮೈತ್ರಿ ಸರ್ಕಾರದ ಸಮನ್ವಯ ಸಮಿತಿಯ ಸದಸ್ಯ ಸಿದ್ದರಾಮಯ್ಯ, ಕುಮಾರಸ್ವಾಮಿ ಸಂಪುಟದ ಸಹೋದ್ಯೋಗಿಗಳಾದ ಡಿ. ಕೆ. ಶಿವಕುಮಾರ್ ಸೇರಿದಂತೆ ಹಲವು ಸದಸ್ಯರು ಹಾಗೂ ಹಿರಿಯ ಅಧಿಕಾರಿಗಳು ಹಾಜರಿದ್ದರು.

## ಶಿಲಾ ಶಿಲ್ಪ ಶಿಬಿರದ ಸಮಾರೋಪ ಸಮಾರಂಭ

ಬೆಂಗಳೂರು ಡಿಸೆಂಬರ್ 22 (ಕರ್ನಾಟಕ ವಾರ್ತೆ)

ಕರ್ನಾಟಕ ಶಿಲ್ಪಕಲಾ ಅಕಾಡೆಮಿ ಬೆಂಗಳೂರು ಹಾಗೂ ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಶತಮಾನೋತ್ಸವ ಸಮಿತಿ ಟ್ರಸ್ಟ್ (ರಿ) ಸ್ಫೂರ್ತಿಧಾಮ, ಬೆಂಗಳೂರು ಸಹಯೋಗದೊಂದಿಗೆ ಡಿಸೆಂಬರ್ 10 ರಿಂದ 24 ರವರೆಗೆ ಜನಪದ ಶಿಲಾ ಶಿಲ್ಪ ಶಿಬಿರವನ್ನು ಸ್ಫೂರ್ತಿಧಾಮ, ಮಾಗಡಿ ಮುಖ್ಯರಸ್ತೆ, ಅಂಜನಾನಗರ, ಬೆಂಗಳೂರು ಇಲ್ಲಿ ಏರ್ಪಡಿಸಲಾಗಿದ್ದು, ಈ ಶಿಬಿರದ ಸಮಾರೋಪ ಸಮಾರಂಭವನ್ನು ಡಿಸೆಂಬರ್ 24 ರಂದು ಸಂಜೆ 4–00 ಗಂಟೆಗೆ ಸ್ಫೂರ್ತಿಧಾಮ, ಮಾಗಡಿ ಮುಖ್ಯರಸ್ತೆ, ಅಂಜನಾನಗರ, ಬೆಂಗಳೂರು ಇಲ್ಲಿ ಏರ್ಪಡಿಸಲಾಗಿದೆ.

ಶಿಬಿರದಲ್ಲಿ ರಚಿತವಾದ ಕಲಾಕೃತಿಗಳ ಲೋಕಾರ್ಪಣೆಯನ್ನು ಶಿಲ್ಪಿ ರು. ಕಾಳಾಚಾರ್, ಅಧ್ಯಕ್ಷರು, ಕರ್ನಾಟಕ ಶಿಲ್ಪಕಲಾ ಅಕಾಡೆಮಿ, ಬೆಂಗಳೂರು ಇವರು ನೆರವೇರಿಸಲಿದ್ದಾರೆ. ಸಮಾರಂಭದಲ್ಲಿ ಹಿರಿಯ ಕಲಾವಿದರಾದ ಶ್ರೀ ಕೆ.ವಿ. ಸುಬ್ರಮಣ್ಯಂ, ಸಮಾರೋಪ ನುಡಿಯನ್ನು ನುಡಿಯಲಿದ್ದಾರೆ. ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ರಂಗಕರ್ಮಿ ಶ್ರೀ ಬಿ.ಎಸ್. ವಿದ್ಯಾರಣ್ಯ, ಭಾಗವಹಿಸಲಿದ್ದಾರೆ.

ಸಮಾರಂಭದ ಅಧ್ಯಕ್ಷತೆಯನ್ನು ಶ್ರೀ ಎಸ್. ಮರಿಸ್ವಾಮಿ, ಅಧ್ಯಕ್ಷರು, ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಶತಮಾನೋತ್ಸವ ಸಮಿತಿ ಟ್ರಸ್ಟ್ (ರಿ) ಸ್ಫೂರ್ತಿಧಾಮ, ಬೆಂಗಳೂರು ಇವರು ವಹಿಸಲಿದ್ದಾರೆ.

## ಮೂರು ದಿನಗಳ ಕಾರ್ಯಾಗಾರ

ಬೆಂಗಳೂರು ಡಿಸೆಂಬರ್ 22 (ಕರ್ನಾಟಕ ವಾರ್ತೆ)

ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯು "Researh Methodology and Data Analysis using Statistical Tools" ಎಂಬ ವಿಷಯದ ಮೇಲೆ 2019 ಜನವರಿ 2 ರಿಂದ 4 ರಂದು ಮೂರು ದಿನಗಳ ಕಾರ್ಯಾಗಾರವನ್ನು ಅಕಾಡೆಮಿ ಕಚೇರಿಯಲ್ಲಿ ಆಯೋಜಿಸಲಿದೆ.

ಈ ಕಾರ್ಯಾಗಾರದಲ್ಲಿ ಪ್ರತಿನಿಧಿಗಳಾಗಿ ರಾಜ್ಯಾದ್ಯಂತ ವಿಜ್ಞಾನ ಪದವಿ ಮತ್ತು ಇಂಜಿನಿಯರಿಂಗ್ ಕಾಲೇಜು ಅಧ್ಯಾಪಕರು ಹಾಗೂ ಯುವ ಸಂಶೋಧನಾ ವಿದ್ಯಾರ್ಥಿಗಳು ಭಾಗವಹಿಸಬಹುದಾಗಿದೆ. ಸದರಿ ಕಾರ್ಯಾಗಾರಕ್ಕೆ ಪ್ರವೇಶ ದರ ಸ್ನಾತಕೋತ್ತರ ವಿದ್ಯಾರ್ಥಿಗಳು ರೂ 100/- ಹಾಗೂ ಅಧ್ಯಾಪಕರಿಗೆ/ಸಂಶೋಧನ ವಿದ್ಯಾರ್ಥಿಗಳಿಗೆ ರೂ 200/- ಆಗಿದ್ದು, ಮೊದಲು ನೋಂದಾಯಿಸಿಕೊಂಡವರಿಗೆ ಹೆಚ್ಚಿನ ಆದ್ಯತೆಯನ್ನು ನೀಡಲಾಗುವುದು. ಅಲ್ಲದೇ ಕಾರ್ಯಗಾರದಲ್ಲಿ ನೋಂದಾಯಿಸಿಕೊಳ್ಳಲು ಡಿಸೆಂಬರ್ 31 (ಸೋಮವಾರ) ಕೊನೆಯ ದಿನವಾಗಿದೆ.

***

## ಕಬ್ಬನ್ ಉದ್ಯಾನವನದಲ್ಲಿ ಈ ಭಾನುವಾರ

ಬೆಂಗಳೂರು ಡಿಸೆಂಬರ್ 22 (ಕರ್ನಾಟಕ ವಾರ್ತೆ)

ಶ್ರೀ ಚಾಮರಾಜೇಂದ್ರ ಉದ್ಯಾನವನ (ಕಬ್ಬನ್ ಪಾರ್ಕ್) ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ. **ದಿನಾಂಕ: 23-12-2018** ರ ಭಾನುವಾರದಂದು ಶ್ರೀ ಚಾಮರಾಜೇಂದ್ರ ಉದ್ಯಾನವನದ (ಕಬ್ಬನ್ ಉದ್ಯಾನವನ) ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಈ ಕೆಳಕಂಡ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸದರಿ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

1) ಕಬ್ಬನ್ ಉದ್ಯಾನವನದ ಆವರಣದಲ್ಲಿ ಬೆಳಿಗ್ಗೆ 8.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯ ಇವರ ಸಹಯೋಗದೊಂದಿಗೆ **ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು** ಏರ್ಪಡಿಸಲಾಗಿದೆ.

2) ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ **ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ** ಸೇವೆಯನ್ನು ನಿಗದಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.

**ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ**

- ಬೆಳಿಗ್ಗೆ 7.00 ಗಂಟೆಯಿಂದ 8.00 ಗಂಟೆಯವರೆಗೆ **ಯೂನಿವರ್ಸ್ ಆರ್ಟ್ ಫೌಂಡೇಶನ್** ಸಂಸ್ಥೆಯ ಸಹಯೋಗದೊಂದಿಗೆ, **ಕವಿತ ಕೆ. ರವರಿಂದ ಭರತನಾಟ್ಯ** ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.